ನಿ-72
ಕ್ರ-133-ಕಂಪ್ಯೂಟರ್

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ**

**ಸೂಚನೆ**

ದಿನಾಂಕ:31.12.2015ರ ಹಿಂದೆ ವಯೋ ನಿವೃತ್ತಿ, ಮರಣ, ರಾಜೀನಾಮೆ ಮತ್ತು ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಅನುದಾನಿತ ಪದವಿ ಮಹಾವಿದ್ಯಾಲಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು. ಆದರೆ, ಇ-ಪೋರ್ಟಲ್ ತಾಂತ್ರಿಕ ದೋಷ ಮತ್ತು ಕೋವಿಡ್-19 ಕಾರಣ ನೀಡಿ ತಡೆಹಿಡಿಯಲಾದ ಪ್ರಕ್ರಿಯೆಯು ಈಗ ಪ್ರಾರಂಭವಾಗಿದ್ದು, ಈಗ ಅನೇಕ ಅಭ್ಯರ್ಥಿಗಳ ವಯೋಮಿತಿ ಮೀರಿದೆ. ಅಂತಹ ಅಭ್ಯರ್ಥಿಗಳಿಗೆ ಹುದ್ದೆಗಳನ್ನು ಅನುಮೋದನೆ ಮಾಡಲು 2 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿ ನ್ಯಾಯ ಒದಗಿಸುವ ಕುರಿತು.

**ಹೇಳಿಕೆ**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/ 2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31.12.2015ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿತ್ತು. ಆ ಸಂದರ್ಭದಲ್ಲಿ ಬೋಧಕರ ಹುದ್ದೆಗೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯು ಸಾಮಾನ್ಯ ಅಭ್ಯರ್ಥಿಗಳಿಗೆ-35 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-38 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳೆಂದು ನಿಗಧಿಯಾಗಿತ್ತು.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕರ ಹುದ್ದೆಯ ನೇರ ನೇಮಕಾತಿಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಯುಪಿಸಿ/2018, ದಿನಾಂಕ: 20.06.2018 ರಲ್ಲಿ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಿದ್ದು, ಅದರಂತೆ, ಸಾಮಾನ್ಯ ಅಭ್ಯರ್ಥಿಗಳಿಗೆ-40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-43 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ಕ್ಕೆ-45 ವರ್ಷಗಳೆಂದು ಹೆಚ್ಚಿಸಲಾಗಿದೆ ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ/87/ಯುಪಿಸಿ/2016, ದಿನಾಂಕ:13.12.2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗದಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಸರ್ಕಾರವು ಅವಕಾಶ ಕಲ್ಪಿಸಿದೆ.

ಪ್ರಸ್ತುತ ಕೆಲವು ಮಾನ್ಯ ಶಾಸಕರುಗಳಿಂದ ಹಾಗೂ ಸಾರ್ವಜನಿಕರುಗಳಿಂದ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕರ ನೇಮಕಾತಿಯಲ್ಲಿ 02 ವರ್ಷಗಳ ವಯೋಮಿತಿ ಸಡಿಲಿಸುವಂತೆ ಟಿಪ್ಪಣಿಗಳು ಹಾಗೂ ಕೋರಿಕೆಗಳು ಸ್ವೀಕೃತವಾಗಿದ್ದು, ಸದರಿ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇಡಿ 176 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ಎ - 72
ಕ್ರ - 133 - ರಂಪ್ಯೂರ್

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಪುಟ್ಟಣ್ಣ, ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಆಯನೂರು ಮಂಜುನಾಥ್, ಶ್ರೀ ಬಸವರಾಜ ಶಿವಲಿಂಗಪ್ಪ ಹೊರಹಟ್ಟಿ, ಶ್ರೀ ಪ್ರಕಾಶ್ ಹುಕ್ಕೇರಿ, ಶ್ರೀ ಅ.ದೇವೇಗೌಡ ಮತ್ತು ಶ್ರೀ ನಿರಾಣಿ ಹಣಮಂತ ರುದ್ರಪ್ಪ ಇವರುಗಳು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ <u>ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಹೇಳಿಕೆ</u>**

**<u>ಸೂಚನೆ</u>**

ದಿನಾಂಕ:31.12.2015ರ ಮುಂಚಿತವಾಗಿ ವಯೋ ನಿವೃತ್ತಿ, ಮರಣ, ರಾಜೀನಾಮೆ ಮತ್ತು ಇನ್ನಿತರೆ ಕಾರಣಗಳಿಂದ ಖಾಲಿಯಾಗಿರುವ ಅನುದಾನಿತ ಪದವಿ ಮಹಾವಿದ್ಯಾಲಯಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿತ್ತು. ಆದರೆ, ಇ-ಪೋರ್ಟಲ್ ತಾಂತ್ರಿಕ ದೋಷ ಮತ್ತು ಕೋವಿಡ್-19 ಕಾರಣ ನೀಡಿ ತಡೆಹಿಡಿಯಲಾದ ಪ್ರಕ್ರಿಯೆಯನ್ನು ಈಗ ಪ್ರಾರಂಭವಾಗಿದ್ದು, ಈಗ ಅನೇಕ ಅಭ್ಯರ್ಥಿಗಳ ವಯೋಮಿತಿ ಮೀರಿದೆ. ಅಂತಹ ಅಭ್ಯರ್ಥಿಗಳಿಗೆ ಹುದ್ದೆಗಳನ್ನು ಅನುಮೋದನೆ ಮಾಡಲು 2 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿ ನ್ಯಾಯ ಒದಗಿಸುವ ಕುರಿತು.

**<u>ಹೇಳಿಕೆ</u>**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/ 2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31.12.2015ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕರ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿತ್ತು. ಆ ಸಂದರ್ಭದಲ್ಲಿ ಬೋಧಕರ ಹುದ್ದೆಗೆ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯು ಸಾಮಾನ್ಯ ಅಭ್ಯರ್ಥಿಗಳಿಗೆ-35 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-38 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ರ ಅಭ್ಯರ್ಥಿಗಳಿಗೆ 40 ವರ್ಷಗಳೆಂದು ನಿಗಧಿಯಾಗಿತ್ತು.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಬೋಧಕರ ಹುದ್ದೆಯ ನೇರ ನೇಮಕಾತಿಗಾಗಿ ಸರ್ಕಾರದ ಆದೇಶ ಸಂಖ್ಯೆ:ಇಡಿ/49/ಯುಪಿಸಿ/2018, ದಿನಾಂಕ: 20.06.2018 ರಲ್ಲಿ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಿದ್ದು, ಅದರಂತೆ, ಸಾಮಾನ್ಯ ಅಭ್ಯರ್ಥಿಗಳಿಗೆ-40 ವರ್ಷಗಳು, ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-II(a), II(b), III(a) ಮತ್ತು III(b) ಗಳಿಗೆ-43 ವರ್ಷಗಳು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-I ಕ್ಕೆ-45 ವರ್ಷಗಳೆಂದು ಹೆಚ್ಚಿಸಲಾಗಿದೆ ಹಾಗೂ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ:ಇಡಿ/87/ಯುಪಿಸಿ/2016, ದಿನಾಂಕ:13.12.2018 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪೂರ್ಣಕಾಲಿಕ ಬೋಧನಾನುಭವ ಹೊಂದಿರುವ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯನ್ನು ನಿಗದಿಪಡಿಸುವುದರೊಂದಿಗೆ ಅವರು ಬೋಧನಾನುಭವ ಹೊಂದಿರುವ ಸೇವಾವಧಿ ಅಥವಾ 5 ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ಅವಧಿಗೆ ಗರಿಷ್ಠ ವಯೋಮಿತಿಯಲ್ಲಿ ವಿನಾಯಿತಿ ನೀಡಲು ಸರ್ಕಾರವು ಅವಕಾಶ ಕಲ್ಪಿಸಿದೆ.

ಪ್ರಸ್ತುತ ಕೆಲವು ಮಾನ್ಯ ಶಾಸಕರುಗಳಿಂದ ಹಾಗೂ ಸಾರ್ವಜನಿಕರುಗಳಿಂದ ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕರ ನೇಮಕಾತಿಯಲ್ಲಿ 02 ವರ್ಷಗಳ ವಯೋಮಿತಿ ಸಡಿಲಿಸುವಂತೆ ಟಿಪ್ಪಣಿಗಳು ಹಾಗೂ ಕೋರಿಕೆಗಳು ಸ್ವೀಕೃತವಾಗಿದ್ದು, ಸದರಿ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಇಡಿ 180 ಯುಪಿಸಿ 2022**

**(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.